ಕರ್ನಾಟಕ ಸರ್ಕಾರ

ಸೆಪ್ಟೆಂಬರ್ 7, 2017

# ಮೈಸೂರು, ಮಂಡ್ಯ ಮತ್ತು ಬೀದರ್ ಜಿಲ್ಲಾ ಸಕ್ಕರೆ ಕಾರ್ಖಾನೆಗಳ ಪುನಶ್ಚೇತನ, ಆಯಾ ಭಾಗದ ಶಾಸಕರೊಂದಿಗೆ ಮುಖ್ಯಮಂತ್ರಿ ಸಮಾಲೋಚನೆ



ಬೆಂಗಳೂರು, ಸೆಪ್ಟೆಂಬರ್ 7:

ಮೈಸೂರು, ಮಂಡ್ಯ ಮತ್ತು ಬೀದರ್ ಜಿಲ್ಲೆಯ ಸಹಕಾರ ಸಕ್ಕರೆ ಕಾರ್ಖಾನೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಯಾ ಭಾಗದ ಶಾಸಕರು ಹಾಗೂ ಅಧಿಕಾರಿಗಳ ಜೊತೆಯಲ್ಲಿ ಸುದೀರ್ಘ ಸಮಾಲೋಚನೆ ನಡೆಸಿದರು.

ಮಂಡ್ಯ ಜಿಲ್ಲೆಯ ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ಎದುರಿಸುತ್ತಿರುವ ಸಮಸ್ಯೆಗಳನ್ನು ಕೂಲಂಕಷವಾಗಿ ಆಲಿಸಿದ ಮುಖ್ಯಮಂತ್ರಿಯವರು, ಕಬ್ಬು ನೀಡಿರುವ ರೈತರಿಗೆ ಕೊಡಬೇಕಿರುವ 6.77 ಕೋಟಿ ರೂ ಹಣವನ್ನು ಕೂಡಲೇ ಬಿಡುಗಡೆ ಮಾಡುವಂತೆ ಹಣಕಾಸು ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜೊತೆಗೆ ಕಬ್ಬು ಅರೆಯುವಿಕೆ ಆರಂಭಿಸಲು ಎರಡು ಕೋಟಿ ರೂ ನೀಡಲು ಒಪ್ಪಿಗೆ ಸೂಚಿಸಿದರು. ಅರೆಯಲು ಸಿದ್ಧವಾಗಿರುವ ಕಬ್ಬು ಪ್ರಮಾಣ ಎಷ್ಟಿದೆ ಎಂಬುದರ ಬಗ್ಗೆ ವರದಿ ನೀಡುವಂತೆ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕರಿಗೆ ಮುಖ್ಯಮಂತ್ರಿ ಸೂಚನೆ ನೀಡಿದರು.

ಮೈಸೂರು ಜಿಲ್ಲೆಯ ಕೆ. ಆರ್. ನಗರದ ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆಯನ್ನು ಗುತ್ತಿಗೆ ಆಧಾರದ ಮೇಲೆ ಖಾಸಗಿಯವರಿಗೆ ವಹಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಒಂದು ಹಂತದ ಇತ್ಯರ್ಥವಾಗಿ ಕಾರ್ಮಿಕರಿಗೆ 14 ಕೋಟಿ ನೀಡಲು ಮುಖ್ಯಮಂತ್ರಿಗಳು ಆದೇಶಿಸಿದರು.

ಕಾರ್ಖಾನೆಯನ್ನು ಗುತ್ತಿಗೆ ಆಧಾರದ ಮೇಲೆ ಖಾಸಗಿಯವರಿಗೆ ವಹಿಸಲು ಕೂಡಲೇ ಟೆಂಡರ್ ಕರೆಯಲು ಸೂಚಿಸಿದರು. ಸಂಕಷ್ಟದಲ್ಲಿರುವ ಕಾರ್ಖಾನೆ ಕಾರ್ಮಿಕರಿಗೆ ರಕ್ಷಣೆ ಒದಗಿಸಬೇಕಿದೆ. ಹೀಗಾಗಿ 154 ಕಾರ್ಮಿಕರಿಗೆ ಒಂದು ಹಂತದ ಇತ್ಯಾರ್ಥವಾಗಿ ಹಣ ನೀಡಬೇಕು ಎಂದರು.

ಗುತ್ತಿಗೆ ಆಧಾರದ ಮೇಲೆ ಕಾರ್ಖಾನೆ ವಹಿಸಿಕೊಳ್ಳಲು ಯಾರೂ ಮುಂದೆ ಬಾರದೇ ಇದ್ದರೆ ಮಾರಾಟ ಮಾಡುವುದಾಗಿ ಸಭೆಯಲ್ಲಿ ಮುಖ್ಯಮಂತ್ರಿ ಹೇಳಿದರು. ಇದಕ್ಕೆ ಶಾಸಕರು ಮತ್ತು ಅಧಿಕಾರಿಗಳು ಒಪ್ಪಿಗೆ ಸೂಚಿಸಿದರು.

ಸಚಿವರಾದ ಡಾ ಎಂ ಸಿ ಮೋಹನ ಕುಮಾರಿ ( ಗೀತಾ ಮಹದೇವ ಪ್ರಸಾದ್ ), ಶಾಸಕರಾದ ಕೆ ಎಸ್ ಪುಟ್ಟಣ್ಣಯ್ಯ, ಸಾ. ರಾ. ಮಹೇಶ್, ರಮೇಶ್ ಬಂಡಿಸಿದ್ದೇಗೌಡ ಅವರು ಸಭೆಯಲ್ಲಿ ಭಾಗಿಯಾಗಿದ್ದರು.

ಅದೇ ರೀತಿ ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ ವಿಚಾರವಾಗಿಯೂ ಸಭೆಯಲ್ಲಿ ಚರ್ಚೆ ನಡೆಯಿತು. ಕಾರ್ಖಾನೆಯ ಪುನಾರಂಭಕ್ಕೆ 20 ಕೋಟಿ ರೂ ಅಗತ್ಯವಿದೆ ಎಂದು ಸ್ಥಳೀಯ ಶಾಸಕರು ತಿಳಿಸಿದರು. ಕಾರ್ಖಾನೆ ಪಡೆಯುವ 10 ಕೋಟಿ ರೂ ಸಾಲಕ್ಕೆ ಸರ್ಕಾರದ ಪ್ರತಿ ಖಾತರಿ ನೀಡಲು ಮುಖ್ಯಮಂತ್ರಿ ಒಪ್ಪಿಗೆ ಸೂಚಿಸಿದರು.

ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಶಾಸಕ ರಾಜಶೇಖರ ಪಾಟೀಲ್ ಮತ್ತಿತರರು ಸಭೆಯಲ್ಲಿ ಹಾಜರಿದ್ದರು.

******************

ಡಿ ಪಿ ಎಂ : ಕೆ ವಿ ಪಿ